Akashvani: Bangalore
National Bulletin In Kannada
25.04.2026: 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

25.04.2026: 7.35AM

********

**ಮುಖ್ಯಾಂಶಗಳು :**

1. ಕನಿಷ್ಠ ಬೆಂಬಲ ಬೆಲೆ ಅಡಿ ಗೋಧಿ ಖರೀದಿ ಗುರಿ ಶೇಕಡ ೧೫ರಷ್ಟು ಹೆಚ್ಚಿಸಿದ ಕೇಂದ್ರ ಸರ್ಕಾರ
2. ಪೇಟಿಎಂ ಪೇಮೆಂಟ್ಸ್ ಬ್ಯಾಂಕ್‌ನ ಬ್ಯಾಂಕಿಂಗ್ ಪರವಾನಗಿ ರದ್ದುಗೊಳಿಸಿದ ಆರ್‌ಬಿಐ
3. ಪಶ್ಚಿಮ ಬಂಗಾಳ ಎರಡನೇ ಹಂತದ ವಿಧಾನಸಭಾ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಂದ ಇಂದು ಪ್ರಚಾರ
4. ಪಶ್ಚಿಮ ಏಷ್ಯಾ ಸಂಘರ್ಷ ಅಂತ್ಯಗೊಳಿಸಲು ಅಮೆರಿಕ-ಇರಾನ್ ಪ್ರಯತ್ನ; ಪಾಕಿಸ್ತಾನ ತಲುಪಿದ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ
5. ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರುಗೆ ೫ ವಿಕೆಟ್ ಜಯ

*********

ಕೇಂದ್ರ ಸರ್ಕಾರ ಪ್ರಸಕ್ತ ಹಂಗಾಮಿನಲ್ಲಿ ಕನಿಷ್ಠ ಬೆಂಬಲ ಬೆಲೆ ಅಡಿ ಗೋಧಿ ಖರೀದಿ ಗುರಿಯನ್ನು ಶೇಕಡ ೧೫ರಷ್ಟು ಹೆಚ್ಚಿಸಿದೆ. ಮೊದಲು ನಿಗದಿಪಡಿಸಿದ್ದ ೩೦ ದಶಲಕ್ಷ ಟನ್ ಗುರಿಯನ್ನು ಈಗ ೩೪.೫ ದಶಲಕ್ಷ ಟನ್‌ಗಳಿಗೆ ಏರಿಸಲಾಗಿದೆ. ಅಕಾಲಿಕ ಮಳೆಯಿಂದಾಗಿ ಬೆಳೆಹಾನಿಗೊಳಗಾಗಿ ಸಂಕಷ್ಟದಲ್ಲಿರುವ ರೈತರಿಗೆ ನೆರವಾಗಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಆಹಾರ ಕಾರ್ಯದರ್ಶಿ ಸಂಜೀವ್ ಚೋಪ್ರಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ವಿವಿಧ ರಾಜ್ಯಗಳ ಖರೀದಿ ಗುರಿಯನ್ನು ಸಹ ಪರಿಷ್ಕರಿಸಲಾಗಿದೆ. ಮಧ್ಯಪ್ರದೇಶದಿಂದ ೧೦ ದಶಲಕ್ಷ ಟನ್, ಉತ್ತರ ಪ್ರದೇಶದಿಂದ ೨.೫, ರಾಜಸ್ತಾನದಿಂದ ೨.೩೫ ದಶಲಕ್ಷ ಟನ್ ಹಾಗೂ ಉತ್ತರಾಖಂಡದಿಂದ ೫ ಸಾವಿರ ಟನ್ ಗೋಧಿ ಖರೀದಿಸುವ ನಿರೀಕ್ಷೆ ಇದೆ. ಅಕಾಲಿಕ ಮಳೆಯಿಂದಾಗಿ ಗೋಧಿಯ ಗುಣಮಟ್ಟದಲ್ಲಿ ವ್ಯತ್ಯಯ

ಉಂಟಾಗಿರುವ ಹಿನ್ನೆಲೆ, ಪಂಜಾಬ್, ಹರಿಯಾಣ, ಮಧ್ಯಪ್ರದೇಶ ಮತ್ತು ರಾಜಸ್ತಾನದಂತಹ ಪ್ರಮುಖ ರಾಜ್ಯಗಳಲ್ಲಿ ಖರೀದಿ ನಿಯಮಗಳನ್ನು ಸಡಿಲಗೊಳಿಸಲಾಗಿದೆ. ಈ ಹೆಚ್ಚುವರಿ ಖರೀದಿಯಿಂದಾಗಿ ೨೦೨೬-೨೭ರಲ್ಲಿ ಒಟ್ಟು ಗೋಧಿಯ ಲಭ್ಯತೆ ಸುಮಾರು ೫೬.೫ ದಶಲಕ್ಷ ಟನ್‌ಗಳಿಗೆ ತಲುಪಲಿದೆ. ಇನ್ನು, ಭಾರೀ ಮತ್ತು ಆಲಿಕಲ್ಲು ಮಳೆಯಿಂದಾಗಿ ಪ್ರಮುಖ ರಾಜ್ಯಗಳಲ್ಲಿ ೨೦೨೫-೨೬ರ ಗೋಧಿ ಉತ್ಪಾದನೆ ಅಲ್ಪ ಪ್ರಮಾಣದಲ್ಲಿ ಕುಸಿದು, ೧೧೦ ರಿಂದ ೧೨೦ ದಶಲಕ್ಷ ಟನ್‌ಗಳಷ್ಟಿರಬಹುದು ಎಂದು ಅಂದಾಜಿಸಲಾಗಿದೆ.

*********

ಭಾರತೀಯ ರಿಸರ್ವ್ ಬ್ಯಾಂಕ್ ಪೇಟಿಎಂ ಪೇಮೆಂಟ್ಸ್ ಬ್ಯಾಂಕಿಂಗ್ ಪರವಾನಗಿಯನ್ನು ರದ್ದುಗೊಳಿಸಿದೆ. ಈ ಆದೇಶ ತಕ್ಷಣದಿಂದಲೇ ಜಾರಿಗೆ ಬರಲಿದ್ದು, ಯಾವುದೇ ರೀತಿಯ ಬ್ಯಾಂಕಿಂಗ್ ವ್ಯವಹಾರಗಳನ್ನು ನಡೆಸದಂತೆ ಬ್ಯಾಂಕ್‌ಗೆ ಸೂಚಿಸಲಾಗಿದೆ ಎಂದು ಆರ್‌ಬಿಐ ತಿಳಿಸಿದೆ. ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ತನ್ನ ಕಾರ್ಯ ನಿರ್ವಹನೆಯನ್ನು ಸ್ಥಗಿತಗೊಳಿಸುವ ವೇಳೆ, ಗ್ರಾಹಕ ಸಂಪೂರ್ಣ ಠೇವಣಿ ಮೊತ್ತವನ್ನು ಮರು ಪಾವತಿಸಲು ಅಗತ್ಯವಿರುವಷ್ಟು ಹಣಕಾಸು ಲಭ್ಯತೆಯನ್ನು ಹೊಂದಿದೆ ಎಂದು ಆರ್‌ಬಿಐ ಸ್ಪಷ್ಟಪಡಿಸಿದೆ. ಕೆಲವು ವರ್ಷಗಳಿಂದ ಆರ್‌ಬಿಐ, ಈ ಬ್ಯಾಂಕಿನ ಮೇಲೆ ನಿಗಾ ಇರಿಸಿದ್ದು, ೨೦೨೨ರ ಮಾರ್ಚ್‌ನಲ್ಲಿ ಹೊಸ ಗ್ರಾಹಕರನ್ನು ಸೇರಿಸಿಕೊಳ್ಳದಂತೆ ಆದೇಶ ನೀಡಲಾಗಿತ್ತು. ತದನಂತರ ೨೦೨೪ರ ಆರಂಭದಲ್ಲಿ ಮತ್ತಷ್ಟು ಕಠಿಣ ನಿರ್ಬಂಧಗಳನ್ನು ವಿಧಿಸಲಾಯಿತು.

*********

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಹಂತದ ಮತದಾನಕ್ಕೆ ದಿನಗಣನೆ ಆರಂಭವಾಗಿದ್ದು, ಪ್ರಚಾರ ಕಾರ್ಯ ಅಂತಿಮ ಘಟ್ಟ ತಲುಪಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು ರಾಜ್ಯಾದ್ಯಂತ ಸರಣಿ ರ್‍ಯಾಲಿ ಮತ್ತು ರೋಡ್ ಶೋಗಳನ್ನು ನಡೆಸುವ ಮೂಲಕ ಮತದಾರರನ್ನು ಸೆಳೆಯಲು ಕಸರತ್ತು ನಡೆಸುತ್ತಿದ್ದಾರೆ. ಈ ಎರಡನೇ ಹಂತದ ಮತದಾನ ಇದೇ ೨೯ ರಂದು ನಡೆಯಲಿದೆ. ಬಿಜೆಪಿಯ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಪೂರ್ವ ಬರ್ಧಮಾನ್ ಜಿಲ್ಲೆಯ ಜಮಾಲ್‌ಪುರದ ಸೆಲಿಮಾಬಾದ್ ತರುಣ್ ಸಂಘ ಮೈದಾನದಲ್ಲಿ ಹಾಗೂ ಹೌರಾದ ಶ್ಯಾಂಪುರದಲ್ಲಿ ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದರ ಜೊತೆಗೆ ಸಚಿವ ಅಮಿತ್ ಶಾ, ಹೌರಾದಲ್ಲಿ ಬೃಹತ್

ರೋಡ್ ಶೋನಲ್ಲಿ ಭಾಗವಹಿಸಲಿದ್ದಾರೆ. ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಇಂದು ರಾಜ್ಯದ ವಿವಿಧೆಡೆ ಚುನಾವಣಾ ರ್‍ಯಾಲಿಗಳನ್ನು ನಡೆಸಲಿದ್ದಾರೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಅವರು ಪೂರ್ವ ಬರ್ಧಮಾನ್‌ನ ಬಜೆಪರ್ತಪುರದಲ್ಲಿ 'ವಿಜಯ್ ಸಂಕಲ್ಪ ಯಾತ್ರೆ'ಯ ನೇತೃತ್ವ ವಹಿಸಲಿದ್ದಾರೆ. ಮತ್ತೊಂದೆಡೆ, ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ,ಇಂದು ಹೂಗ್ಲಿಯ ಶ್ರೀರಾಮಪುರ, ಕೋಲ್ಕತ್ತಾದ ಶಾಹಿದ್ ಮಿನಾರ್ ಮತ್ತು ಮೇಟಿಯಾಬ್ರೂಜ್‌ನಲ್ಲಿ ಬಹಿರಂಗ ಸಭೆಗಳನ್ನು ನಡೆಸಲಿದ್ದಾರೆ. ತೃಣಮೂಲ ಕಾಂಗ್ರೆಸ್ ನಾಯಕ ಅಭಿಷೇಕ್ ಬ್ಯಾನರ್ಜಿ, ಬಸಿರ್ಹಟ್ ಮತ್ತು ಕ್ಯಾನಿಂಗ್ ವೆಸ್ಟ್‌ನಲ್ಲಿ ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದು, ನಂತರ ಬಾಲಿಯಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ರೋಡ್ ಶೋ ನಡೆಸಲಿದ್ದಾರೆ.

*********

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೩ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

*********

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷವನ್ನು ಕೊನೆಗಾಣಿಸುವ ನಿಟ್ಟಿನಲ್ಲಿ ಇರಾನ್ ಮತ್ತು ಅಮೆರಿಕ ನಡುವೆ ಸ್ಥಗಿತಗೊಂಡಿರುವ ಮಾತುಕತೆಗಳಿಗೆ ಮರುಜೀವ ನೀಡಲು ರಾಜತಾಂತ್ರಿಕ ಪ್ರಯತ್ನಗಳು ಚುರುಕುಗೊಂಡಿದ್ದು, ಇದರ ಭಾಗವಾಗಿ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ, ನಿನ್ನೆ ತಡರಾತ್ರಿ ಪಾಕಿಸ್ತಾನದ ಇಸ್ಲಮಾಬಾದ್‌ಗೆ ತಲುಪಿದ್ದಾರೆ. ಇರಾನ್‌ನ ನಿಯೋಗದಲ್ಲಿ ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಇಸ್ಮೈಲ್ ಬಕಾಯ್ ಇದ್ದಾರೆ. ಇರಾನ್ ಮತ್ತು ಅಮೆರಿಕ

ನಡುವೆ ಯಾವುದೇ ನೇರ ಸಭೆ ನಿಗದಿಯಾಗಿಲ್ಲ. ಬದಲಾಗಿ ಇರಾನ್‌ನ ಅಭಿಪ್ರಾಯ ಮತ್ತು ಕಳವಳಗಳನ್ನು ಪಾಕಿಸ್ತಾನದ ಮೂಲಕ ಅಮೆರಿಕಾಗೆ ತಿಳಿಸಲಾಗುವುದು ಎಂದು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರರು ಸಾಮಾಜಿಕ ಮಾಧ್ಯಮದಲ್ಲಿ ಸ್ಪಷ್ಟನೆ ನೀಡಿದ್ದಾರೆ. ಮತ್ತೊಂದೆಡೆ ಅಮೆರಿಕ ಈ ರಾಜತಾಂತ್ರಿಕ ಪ್ರಯತ್ನಕ್ಕೆ ಸಿದ್ಧತೆ ನಡೆಸಿದ್ದು, ಅಮೆರಿಕ ವಿಶೇಷ ರಾಯಭಾರಿ ಸ್ಟೀವ್ ವಿಟ್‌ಕಾಫ್ ಮತ್ತು ಜರೆದ್ ಕುಷ್ನೆರ್ ಚರ್ಚೆಗಳಿಗಾಗಿ ಇಸ್ಲಮಾಬಾದ್‌ಗೆ ಆಗಮಿಸುವ ನಿರೀಕ್ಷೆ ಇದೆ. ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ವಾಷಿಂಗ್ಟನ್‌ನಿಂದಲೇ ಈ ಮಾತುಕತೆಯ ಉಸ್ತುವಾರಿ ವಹಿಸಲಿದ್ದು, ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೋ ಮತ್ತು ರಾಷ್ಟ್ರೀಯ ಭದ್ರತಾ ತಂಡದೊಂದಿಗೆ ಸಮನ್ವಯ ಸಾಧಿಸಲಿದ್ದಾರೆ ಎಂದು ಶ್ವೇತಭವನದ ಮಾಧ್ಯಮ ಕಾರ್ಯದರ್ಶಿ ಕ್ಯಾರೋಲಿನಾ ಲೆವಿಟ್ ತಿಳಿಸಿದ್ದಾರೆ.

*********

ಇರಾನ್‌ನ ತೈಲ ಸಾಗಾಣೆಯಲ್ಲಿ ತೊಡಗಿರುವ ಚೀನಾ ಮೂಲದ ಪ್ರಮುಖ ತೈಲ ಸಂಸ್ಕರಣಾಗಾರ ಮತ್ತು ಸುಮಾರು ೪೦ ಹಡಗು ಕಂಪನಿಗಳು ಹಾಗೂ ಟ್ಯಾಂಕರ್‌ಗಳ ಮೇಲೆ ಅಮೆರಿಕ ಆರ್ಥಿಕ ನಿರ್ಬಂಧ ವಿಧಿಸಿದೆ. ಇರಾನ್‌ನೊಂದಿಗೆ ವ್ಯವಹಾರ ನಡೆಸುವ ಸಂಸ್ಥೆಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಮೆರಿಕ ನೀಡಿದ್ದ ಎಚ್ಚರಿಕೆಯ ಬೆನ್ನಲ್ಲೇ ಈ ನಿರ್ಧಾರ ಹೊರಬಿದ್ದಿದೆ. ನಿರ್ಬಂಧಕ್ಕೆ ಗುರಿಯಾಗಿರುವ ಸಂಸ್ಥೆಗಳಲ್ಲಿ ಚೀನಾದ ಬೃಹತ್ ಸ್ವತಂತ್ರ ತೈಲ ಸಂಸ್ಕರಣಾಗಾರಗಳಲ್ಲಿ ಒಂದಾದ ದಲಿಯಾನ್‌ನಲ್ಲಿರುವ ಹೆಂಗ್ಲಿ ಪೆಟ್ರೋ ಕೆಮಿಕಲ್ ಕೂಡ ಸೇರಿದೆ. ಇರಾನ್‌ನ ಪ್ರಮುಖ ಆದಾಯದ ಮೂಲವಾಗಿರುವ ತೈಲ ರಫ್ತನ್ನು ತಡೆಯಲು ಅಮೆರಿಕ ನಡೆಸುತ್ತಿರುವ ವ್ಯಾಪಕ ಪ್ರಯತ್ನದ ಭಾಗವಾಗಿ ಈ ಕ್ರಮ ಕೈಗೊಳ್ಳಲಾಗಿದೆ.

*********

೨೦೨೭ರ ಜನಗಣತಿಗಾಗಿ ರಾಷ್ಟ್ರೀಯ ಟೋಲ್-ಫ್ರೀ ಸಹಾಯವಾಣಿ ಸಂಖ್ಯೆ ೧೮೫೫ ಈಗ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತರ ಕಚೇರಿ ತಿಳಿಸಿದೆ. ಇದು ಮನೆಗಳ ಪಟ್ಟಿ ಮತ್ತು ವಸತಿ ಗಣತಿಯ ಕುರಿತು ಪ್ರಾದೇಶಿಕ ಭಾಷೆಗಳು ಮತ್ತು ಇಂಗ್ಲಿಷ್‌ನಲ್ಲಿ ಮಾರ್ಗದರ್ಶನ ನೀಡುತ್ತದೆ. ಈ ಸೇವೆಯು ಭಾಗವಹಿಸುವಿಕೆಯನ್ನು ಸರಳಗೊಳಿಸುವುದು, ಸ್ಪಷ್ಟತೆಯನ್ನು ಖಚಿತಪಡಿಸುವುದು

ಮತ್ತು ನಿರ್ಣಾಯಕ ರಾಷ್ಟ್ರೀಯ ಕಾರ್ಯಕ್ಕೆ ಪರಿಣಾಮಕಾರಿಯಾಗಿ ಕೊಡುಗೆ ನೀಡುವಲ್ಲಿ ನಾಗರಿಕರನ್ನು ಬೆಂಬಲಿಸುವ ಗುರಿಯನ್ನು ಹೊಂದಿದೆ.

*********

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಗುಜರಾತ್ ಟೈಟಾನ್ಸ್ ವಿರುದ್ಧ ೫ ವಿಕೆಟ್‌ಗಳ ಗೆಲುವು ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್, ಸಾಯಿ ಸುದರ್ಶನ್ ಅವರ ೫೮ ಎಸೆತಗಳಲ್ಲಿ ಶತಕ ಮತ್ತು ಶುಭ್‌ಮನ್ ಗಿಲ್ ಹಾಗೂ ಜಾಸ್ ಬಟ್ಲರ್ ಅವರು ಗಳಿಸಿದ ರನ್‌ಗಳ ನೆರವಿನೊಂದಿಗೆ ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೦೫ ರನ್ ಗಳಿಸಿತು. ಪ್ರತಿಯಾಗಿ ಬೆಂಗಳೂರು ತಂಡ, ೧೮.೫ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೬ ರನ್‌ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು. ವಿರಾಟ್ ಕೊಹ್ಲಿ ಗಳಿಸಿದ ೮೧ ಹಾಗೂ ದೇವದತ್ತ ಪಡಿಕಲ್ ಗಳಿಸಿದ ೫೫ ರನ್ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರೆ, ಅಂತಿಮ ಹಂತದಲ್ಲಿ ಕೃಣಾಲ್ ಪಾಂಡ್ಯ ಗಳಿಸಿದ ಸಮಯೋಚಿತ ೨೩ ರನ್ ತಂಡಕ್ಕೆ ಗೆಲುವು ತಂದುಕೊಟ್ಟಿತು. ಇಂದು ಎರಡು ಪಂದ್ಯಗಳು ನಡೆಯಲಿದ್ದು, ಮಧ್ಯಾಹ್ನ ೩.೩೦ಕ್ಕೆ ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ರಾತ್ರಿ ೭.೩೦ಕ್ಕೆ ನಡೆಯಲಿರು ದಿನದ ಎರಡನೇ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಸೆಣಸಲಿವೆ.

*********

ಜೋಹಾನ್ಸ್‌ಬರ್ಗ್‌ನ ವಾಂಡರರ್ಸ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐದು ಪಂದ್ಯಗಳ ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ ನಾಲ್ಕನೇ ಪಂದ್ಯದಲ್ಲಿ ಭಾರತ ತಂಡ ಆತಿಥೇಯ ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ. ಪಂದ್ಯ ರಾತ್ರಿ ೯:೩೦ಕ್ಕೆ ಆರಂಭವಾಗಲಿದೆ. ಸರಣಿಯಲ್ಲಿ ದಕ್ಷಿಣ ಆಫ್ರಿಕಾ ತಂಡ ಸಂಪೂರ್ಣವಾಗಿ ಪ್ರಾಬಲ್ಯ ಸಾಧಿಸಿದ್ದು, ಐದು ಪಂದ್ಯಗಳ ಸರಣಿಯಲ್ಲಿ ೩-೦ಯಿಂದ ಮುನ್ನಡೆ ಸಾಧಿಸಿದೆ.

*********